ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲಾ ಕಟ್ಟಡಗಳು

3559 (3508) ಶ್ರೀ ಕೃಷ್ಣಪ್ಪ ವಿ (ದೊಡ್ಡಬಳ್ಳಾಪುರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಪ್ರಾಥಮಿಕ ಶಾಲಾ ಕಟ್ಟಡ ಇಲ್ಲದೆ ಇರುವ ಶಾಲೆಗಳ ಸಂಖ್ಯೆ ಎಷ್ಟು;

ಆ) ಈ ಶಾಲೆಗಳಿಗೆ ಕಟ್ಟಡ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ;

ಇ) ಹಾಗಿದ್ದಲ್ಲಿ ಯಾವಾಗ ಕಟ್ಟಡಗಳನ್ನು ಪೂರ್ಣಗೊಳಿಸಲಾಗುವುದು;

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಕಟ್ಟಡ ಇಲ್ಲದೆ ಇರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಸಂಖ್ಯೆ 11.

ಆ) ಸರ್ವ ಶಿಕ್ಷಾ ಅಭಿಯಾನದಡಿ ಕಟ್ಟಡಗಳನ್ನು ಹಂತ ಹಂತವಾಗಿ ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) 11 ಶಾಲೆಗಳ ಪೈಕಿ 9 ಶಾಲೆಗಳಿಗೆ ನಿವೇಶನದ ಲಭ್ಯತೆ ಇಲ್ಲದಿರುವುದರಿಂದ ಕಟ್ಟಡಗಳ ನಿರ್ಮಾಣ ಸಾಧ್ಯವಾಗಿರುವುದಿಲ್ಲ. ನಿವೇಶನವನ್ನು ಪಡೆಯಲು ಪ್ರಯತ್ನಿಸಲಾಗುತ್ತಿದ್ದು, ನಿವೇಶನ ದೊರೆತ ಕೂಡಲೇ ಕಟ್ಟಡಗಳ ನಿರ್ಮಾಣಕ್ಕೆ ಕ್ರಮ ಕೈ ಗೊಳ್ಳಲಾಗುವುದು. ಉಳಿದ 2 ಕಡೆ ಈ ವರ್ಷ ಶಾಲೆಗಳು ಪ್ರಾರಂಭವಾಗಿರುವುದರಿಂದ ಕಟ್ಟಡಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ದೊಡ್ಡಬಳ್ಳಾಪುರ ಕಾಲೇಜು ಕಟ್ಟಡಕ್ಕೆ ಹಣ ಒದಗಿಸುವುದು

3560 (3509) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಾನ್ಯ ಮುಖ್ಯಮಂತ್ರಿಗಳು ಹಾಗೂ ಸಚಿವರು ಕಳೆದ ವರ್ಷ ದೊಡ್ಡಬಳ್ಳಾಪುರಕ್ಕೆ ಭೇಟಿ ಕೊಟ್ಟಾಗ ಕಾಲೇಜು ಕಟ್ಟಡಕ್ಕೆ 40.00 ಲಕ್ಷ ರೂ.ಗಳನ್ನು ನೀಡುವುದಾಗಿ ತಿಳಿಸಿರುವುದು ನಿಜವಲ್ಲವೇ;

ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಇದಕ್ಕೆ ಹಣ ಒದಗಿಸಲಾಗಿದೆಯೇ; ಒದಗಿಸಿದ್ದಲ್ಲಿ ಅದರ ಮೊತ್ತವೆಷ್ಟು; ಒದಗಿಸದಿದ್ದಲ್ಲಿ ಕಾರಣವೇನು;

ಇ) ಇಲ್ಲವಾದಲ್ಲಿ ಹಣ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ?

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು):

ಅ) ಹೌದು

ಆ) ಹುಡ್ಕೋ ಯೋಜನೆಯಡಿ ಒದಗಿಸಿಕೊಳ್ಳಲಾಗಿದೆ.

ಒಟ್ಟು ರೂ. 78.08 ಲಕ್ಷಗಳು

ಪ್ರಶ್ನೆ ಉದ್ಭವಿಸುವುದಿಲ್ಲ

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ತುರುವೇಕೆರೆ ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ಯೋಜನೆಗಳ ಕಾಮಗಾರಿಗಳು

3562 (3389) ಶ್ರೀ ಲಕ್ಷ್ಮೀ ನಾರಾಯಣ ಎಂ.ಡಿ. (ಅಣ್ಣಯ್ಯ) (ತುರುವೇಕೆರೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?